## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವಿ. ಸಂಕನೂರ ಇವರ ಶೂನ್ಯ ವೇಳೆಯ ಸೂಚನೆಗೆ ಕನ್ನಡ ಮತ್ತು ಸಂಸ್ಕೃತಿ ಸಚಿವರ ಹೇಳಿಕೆ

**ಪ್ರಶ್ನೆ:**

ಗದಗ ನಗರದ ವಿಶ್ವೇಶ್ವರ ಪೂಣ್ಯಾಶ್ರಮದ ಪಕ್ಕದಲ್ಲಿ ನಿರ್ಮಾಣಗೊಳ್ಳುತ್ತಿರುವ ಪುಟ್ಟರಾಜ ಸ್ಮಾರಕ ಭವನದ ಕಾಮಗಾರಿ ಅನುದಾನದ ಕೊರತೆಯಿಂದ ಅರ್ಧಕ್ಕೆ ನಿಂತಿದ್ದು, ಇನ್ನಷ್ಟು ದಿನಗಳು ಹೀಗೆ ಹೋದರೆ ಕಟ್ಟಿರುವ ಕಟ್ಟಡವು ಹಾಳಾಗುವ ಅಪಾಯವಿದೆ ಎಂದು ಸಾರ್ವಜನಿಕರು ಆತಂಕ ವ್ಯಕ್ತಪಡಿಸುತ್ತಿದ್ದಾರೆ.

ಈಗಾಗಲೇ ಈ ಕಟ್ಟಡ ನಿರ್ಮಾಣಕ್ಕೆ ಸರ್ಕಾರ ರೂ.6.24 ಕೋಟಿ ಖರ್ಚು ಮಾಡಿದ್ದು, ಕಟ್ಟಡ ಪೂರ್ಣಗೊಳಿಸಲು ಇನ್ನು ರೂ.5 ರಿಂದ 7 ಕೋಟಿ ಹಣ ಹೆಚ್ಚುವರಿಯಾಗಿ ಬೇಕಾಗಿರುವುದು. ಸರ್ಕಾರಕ್ಕೆ ರೂ.5.00 ಕೋಟಿ ಹಣ ದೊಡ್ಡದೇನಲ್ಲ. ಆದರೆ ಅಂತ ಅನಾಥ ಮಕ್ಕಳಿಗೆ ಬೆಳಕು ನೀಡಿದ ವಿಶೇಶ್ವರ ಪುಣ್ಯಾಶ್ರಮದ ಪೀಠಾಧಿಪತಿಗಳಾಗಿ ಕಾರ್ಯನಿರ್ವಹಿಸಿದ ಲಿಂಗೈಕ್ಯ ಪುಟ್ಟರಾಜ ಗವಾಯಿಗಳ ಬಗ್ಗೆ ಸರ್ಕಾರಕ್ಕೆ ಕಾಳಜಿ ಇಲ್ಲದಿರುವುದಕ್ಕೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿರುವರು.

ಹೆಚ್ಚುವರಿ ಅನುದಾನ ಬಿಡುಗಡೆಗೆ ಸರ್ಕಾರಕ್ಕೆ ಮನವಿ ಸಲ್ಲಿಸಿದರೂ ಬಿಡುಗಡೆಯಾಗದ ಹಿನ್ನೆಲೆಯಲ್ಲಿ ಭಕ್ತರು ಬಿಕ್ಷೆ ಬೇಡಿ ಸಂಗ್ರಹವಾದ ಹಣವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕೊಟ್ಟಿರುವುದಾಗಿ ಪತ್ರಿಕೆಯಲ್ಲಿ ಪ್ರಕಟವಾಗಿರುವುದು ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಆದಷ್ಟು ಬೇಗನೆ ಅನುದಾನ ಬಿಡುಗಡೆ ಮಾಡಿ ಪುಟ್ಟರಾಜ ಸ್ಮಾರಕ ಭವನ ಪೂರ್ಣಗೊಳಿಸಲು ಒತ್ತಾಯಿಸುತ್ತೇನೆ.

**ಹೇಳಿಕೆ:**

ಸರ್ಕಾರದ ಆದೇಶ ಸಂ: ಕಸಂವಾಪ್ರ 61 ಸ್ಮಾಪ್ರನಿ 2010 ದಿ:06.12.2010ರಲ್ಲಿ ಗದಗನಲ್ಲಿ ಪದ್ಮಭೂಷಣ ದಿ|| ಪಂ. ಪುಟ್ಟರಾಜ ಗವಾಯಿಯವರ ಸ್ಮಾರಕ ಭವನ ನಿರ್ಮಾಣ ಕಾಮಗಾರಿಗೆ ರೂ.5.00 ಕೋಟಿಗಳನ್ನು ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಕಸಂವಾಪ್ರ 61 ಸ್ಮಾಪ್ರನಿ 2010 ದಿ:25.03.2011ರ ಆದೇಶದಲ್ಲಿ ಗದಗನಲ್ಲಿ ದಿ|| ಪಂ. ಪುಟ್ಟರಾಜ ಗವಾಯಿಯವರ ಸ್ಮಾರಕ ಭವನ ನಿರ್ಮಾಣ ಕಾಮಗಾರಿಯನ್ನು ರೂ.5.00 ಕೋಟಿಗಳ ವೆಚ್ಚದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ. ಅದರಂತೆ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಗೆ ಬಿಡುಗಡೆ ಮಾಡಿ ಆದೇಶಿಸಲಾಗಿದೆ.

ಮುಂದುವರೆದ ಹೆಚ್ಚುವರಿ ಕಾಮಗಾರಿಗಳಿಗೆ ಒಟ್ಟು ರೂ.124.42ಲಕ್ಷಗಳನ್ನು ಬಿಡುಗಡೆ ಮಾಡುವಂತೆ ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ ಇವರು ಕೋರಿದ ಮೇರೆಗೆ, ಸರ್ಕಾರದ ಆದೇಶ ಸಂಖ್ಯೆ: ಕಸಂವಾ 321 ಕಸಧ 2021, ದಿ:15.03.2024ರ ಆದೇಶದಲ್ಲಿ ಹೆಚ್ಚುವರಿಯಾಗಿ ಕೈಗೊಂಡಿರುವ ಕಾಮಗಾರಿಗಳಿಗೆ ಪಾವತಿಸಲು ಬಾಕಿಯಿರುವ ರೂ.124.42 ಲಕ್ಷಗಳನ್ನು ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಗೆ ಬಿಡುಗಡೆ ಮಾಡಲು ಮಂಜೂರಾತಿ ನೀಡಿ ಆದೇಶಿಸಲಾಗಿದ್ದು, ಜಿಲ್ಲಾಧಿಕಾರಿಗಳು, ಗದಗ ಜಿಲ್ಲೆ, ಗದಗ ಇವರಿಗೆ ಬಿಡುಗಡೆ ಮಾಡಲಾಗಿದೆ.

ಆಡಳಿತಾತ್ಮಕ ಅನುಮೋದನೆ ನೀಡಿರುವ ಮೊತ್ತದಲ್ಲಿ ಬಿಡುಗಡೆ ಮಾಡಬೇಕಾಗಿರುವ ಅನುದಾನ ಯಾವುದು ಇರುವುದಿಲ್ಲ.

ಸಂಖ್ಯೆ: ಕಸಂವಾ 36 ಕವಿಸ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು